ಕ್ರ.ಸ	ಜಿಲ್ಲೆ	2000–01	2001–02	2002–03
18	ಹಾಸನ	39.58	41.21	49.74
19	ಹಾವೇರಿ	45.47	46.41	57.84
20	ಗದಗ	39.21	35.67	45.88
21	ಧಾರವಾಡ	54.15	39.96	58.48
22	ಚಿಕ್ಕೋಡಿ	–	49.63	71.33
23	ಬೆಳಗಾಂ	49.85	43.37	56.62
24	ಬಾಗಲಕೋಟೆ	51.39	44.00	52.80
25	ಬಿಜಾಪುರ	55.39	43.49	47.10
26	ಕಾರವಾರ	52.28	65.34	70.13
27	ಯಾದಗಿರ್	–	25.06	41.93
28	ಗುಲ್ಬರ್ಗಾ	24.04	24.54	39.62
29	ಕೊಪ್ಪಳ	30.13	26.28	42.78
30	ರಾಯಚೂರು	43.86	32.82	42.18
31	ಬೀದರ್	44.45	38.82	45.99
32	ಬಳ್ಳಾರಿ	54.50	32.88	47.65

ರಾಜ್ಯದಲ್ಲಿ ಶಿಕ್ಷಕಿಯರ ಸಂಘಟನೆಗೆ ಮಾನ್ಯತೆ

4115 (4711) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿರುವ ಶಿಕ್ಷಕಿಯರ ಸಂಘಟನೆಗೆ ಸರ್ಕಾರ ಇನ್ನೂ ಮಾನ್ಯತೆ ನೀಡದಿರುವುದು ನಿಜವೇ;

ಆ) ಮಹಿಳೆಯರಿಗೆ ಆದ್ಯತೆ ನೀಡುವ ಸಲುವಾಗಿ ಶಿಕ್ಷಕ ಹುದ್ದೆಯಲ್ಲಿರುವ ಶೇ.75 ಶಿಕ್ಷಕಿಯರಿಗೆ ಅವರದೇ ಆದ ಸಂಘಟನೆ ಕಟ್ಟಲು ಅವಕಾಶ ಇಲ್ಲವೇ;

ಇ) ಈ ಬಗ್ಗೆ ಸರ್ಕಾರದ ನಿಲುವೇನು?

ಪ್ರೊ। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಹೌದು

ಆ) ರಾಜ್ಯದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕ ಶಿಕ್ಷಕಿರಯನ್ನು ಒಳಗೊಂಡ ಮಾನ್ಯತೆ ಪಡೆದ ಸಂಘವು ಇರುತ್ತದೆ.

ಇ) ಪ್ರಾಥಮಿಕ ಶಾಲಾ ಶಿಕ್ಷಕ ವೃಂದದ ಎರಡನೇ ಸಂಘಕ್ಕೆ ಮಾನ್ಯತೆ ಮಾಡುವ ಅವಶ್ಯಕತೆ ಇರುವುದಿಲ್ಲ.

ಉಡುಪಿ ಜಿಲ್ಲೆಯಲ್ಲಿ ಏಡ್ಸ್ ಮತ್ತು ಮಲೇರಿಯಾ ರೋಗಗಳು ಹೆಚ್ಚಾಗಿರುವುದು

4116 (4712) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ "ಏಡ್ಸ್" ರೋಗ ಹಾಗೂ "ಮಲೇರಿಯಾ" ರೋಗಿಗಳ ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು;

ಆ) ಕಳೆದೆರಡು ವರ್ಷಗಳಲ್ಲಿ ತುಲನಾತ್ಮಕವಾಗಿ ಈ ರೋಗಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ಒದಗಿಸುವುದು)?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 2003ನೇ ಸಾಲಿನಲ್ಲಿ ಜೂನ್ ಅಂತ್ಯದವರೆಗೆ ಉಡುಪಿ ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ವರದಿಯಾದ ಏಡ್ಸ್ ಹಾಗೂ ಮಲೇರಿಯ ಪ್ರಕರಣಗಳು ಹೀಗಿವೆ.

ಕ್ಷೇತ್ರದ ಹೆಸರು	ಏಡ್ಸ್ ಪ್ರಕರಣಗಳು	ಮಲೇರಿಯ ಪ್ರಕರಣಗಳು
ಕಾಪು	–	151
ಉಡುಪಿ	94	123
ಬ್ರಹ್ಮಾವರ	–	73
ಬೈಂದೂರು	–	14
ಕುಂದಾಪುರ	70	79
ಕಾರ್ಕಳ	42	181
ಒಟ್ಟು	**206**	**621**

ಆ) ಬಂದಿದೆ.

ಇ)

I. ಏಡ್ಸ್ ರೋಗ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:

1. ಉಡುಪಿ ಜಿಲ್ಲಾ ಆಸ್ಪತ್ರೆ ಹಾಗೂ ಕೆ.ಎಂ.ಸಿ., ಮಣಿಪಾಲ್ ಆಸ್ಪತ್ರೆಗಳಲ್ಲಿ ಸ್ವಯಂಪ್ರೇರಿತ ಸಮಾಲೋಚನೆ ಮತ್ತು ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

2. ಉಡುಪಿ ಜಿಲ್ಲಾ ಆಸ್ಪತ್ರೆಯಲ್ಲಿ ಲೈಂಗಿಕ ಚಿಕಿತ್ಸಾಲಯಕ್ಕೆ ನ್ಯಾಕೋ ನೆರವಿನಿಂದ ಉಪಕರಣಗಳನ್ನು ಮತ್ತು ಲೈಂಗಿಕ ರೋಗಗಳ ಚಿಕಿತ್ಸೆಗೆ ಬೇಕಾಗುವ ಔಷಧಿಗಳನ್ನು ಒದಗಿಸಲಾಗಿದೆ.

3. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಉಪ ಆರೋಗ್ಯ ಕೇಂದ್ರಗಳಲ್ಲಿರುವ ವಿವಿಧ ಸಿಬ್ಬಂದಿಗಳ ಹಾಗೂ ಇತರೆ ಇಲಾಖೆಗಳ ಸಹಕಾರದೊಂದಿಗೆ ಏಡ್ಸ್ ರೋಗ ತಡೆಗಟ್ಟುವಲ್ಲಿ ಜಿಲ್ಲಾದ್ಯಂತ ಪ್ರಚಾರ ಕೈಗೊಳ್ಳಲಾಗಿದೆ. ಪ್ರತಿ ವರ್ಷ ಡಿಸೆಂಬರ್ 1 ರಂದು ವಿಶ್ವ ಏಡ್ಸ್ ದಿನವನ್ನು ಮತ್ತು ಪ್ರತಿ ವರ್ಷ ಅಕ್ಟೋಬರ್ 1 ರಂದು ಸ್ವಯಂಪ್ರೇರಿತ ರಕ್ತದಾನ ದಿನವನ್ನು ಆಚರಿಸಲಾಗುತ್ತಿದೆ. ಜಿಲ್ಲೆಯಲ್ಲಿ ಆರೋಗ್ಯ ಇಲಾಖಾ ವತಿಯಿಂದ ಏಡ್ಸ್ ನಿಯಂತ್ರಣ ಬಗ್ಗೆ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

4. ಕರ್ನಾಟಕದಾದ್ಯಂತ ಕುಟುಂಬ ಆರೋಗ್ಯ ಅರಿವು ಆಂದೋಲನ ಕಾರ್ಯಕ್ರಮವನ್ನು ಪ್ರತೀ ವರ್ಷವು ಆಚರಿಸಲಾಗುತ್ತಿದೆ. ಈ ವರ್ಷ ಏಪ್ರಿಲ್ 21 ರಿಂದ ಮೇ 9, 2003 ರವರೆಗೆ ಸದರಿ ಕಾರ್ಯಕ್ರಮವನ್ನು ಆಚರಿಸಲಾಗಿದೆ.

5. ಜಿಲ್ಲಾ ಆಸ್ಪತ್ರೆಯಲ್ಲಿರುವ ರಕ್ತ ನಿಧಿ ಕೇಂದ್ರವನ್ನು ಆಧುನೀಕರಿಸಲಾಗಿದೆ ಹಾಗೂ ಕುಂದಾಪುರದಲ್ಲಿ ರಕ್ತ ಶೇಖರಣಾ ಕೇಂದ್ರವನ್ನು ಸ್ಥಾಪಿಸಲಾಗಿದೆ.

6. ತಾಯಿಂದ ಶಿಶುವಿಗೆ ಹರಡುವ ಸೋಂಕನ್ನು ತಡೆಗಟ್ಟುವ ಸಲುವಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಪಿ.ಪಿ.ಟಿ.ಸಿ.ಟಿ. ಕೇಂದ್ರವನ್ನು ಪ್ರಾರಂಭಿಸಲಾಗಿದೆ.

7. ಇವುಗಳಲ್ಲದೆ ಜನಜಾಗೃತಿ ಕಾರ್ಯಕ್ರಮಗಳನ್ನು ಜಾನಪದ ಕಲಾವಿದರ ಮೂಲಕ ಹಾಗೂ ಟಿವಿ ಸ್ಪಾಟ್ಸ್ ಮತ್ತು ರೇಡಿಯೋ ಜಿಂಗಲ್ಸ್ ಪ್ರದರ್ಶಿಸುವುದರ ಮೂಲಕ ಹಮ್ಮಿಕೊಳ್ಳಲಾಗಿದೆ. ಭಿತ್ತಿ ಪತ್ರ, ಕರ ಪತ್ರ, ಹೊತ್ತಿಗೆಗಳು ಹಾಗೂ ಪುಸ್ತಕಗಳನ್ನು ಮುದ್ರಿಸಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಸದಸ್ಯರುಗಳಿಗೆ ವಿತರಿಸಲಾಗಿದೆ ಹಾಗೂ ತರಬೇತಿ ನೀಡಲಾಗಿದೆ.

8. ಚಾಪಾ ಕಾರ್ಯಕ್ರಮಗಳನ್ನು ಮತ್ತು ಶಾಲಾ ಕಾಲೇಜುಗಳಲ್ಲಿ ರಸ ಪ್ರಶ್ನೆ ಹಾಗೂ ಸಂವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

9. ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಶಾಲಾ ಮಕ್ಕಳಿಗೆ ಅರಿವು ಮೂಡಿಸಲಾಗುತ್ತಿದೆ.

10. ಉಡುಪಿಯಲ್ಲಿ ಕೇರ್ ಮತ್ತು ಸಪೋರ್ಟ್ ಸೆಂಟರ್ (ಆರೈಕೆ ಮತ್ತು ಬೆಂಬಲ) ಅನ್ನು 2002 ರಲ್ಲಿ ಸ್ಥಾಪಿಸಲಾಗಿದೆ. ಈ ಕೇರ್ ಮತ್ತು ಸಪೋರ್ಟ್ ಸೆಂಟರ್ ಅನ್ನು ಫ್ರೀಡಮ್ ಫೌಂಡೇಷನ್ ಎಂಬ ಸ್ವಯಂ ಸೇವಾ ಸಂಸ್ಥೆಯು ನಡೆಸುತ್ತಿದೆ. ಹೆಚ್.ಐ.ವಿ/ಏಡ್ಸ್ (ಹ್ಯೂಮನ್ ಇಮ್ಯುನೋಡಿಫಿಶಿಯೆನ್ಸಿ ವೈರಸ್) ಸೋಂಕಿನೊಂದಿಗೆ ಜೀವಿಸುತ್ತಿರುವ ಜನರಿಗೆ ಉತ್ತಮ ದರ್ಜೆ ಆರೈಕೆ ಒದಗಿಸಲು ಮತ್ತು ಅವರಿಗೆ ಬೆಂಬಲ ನೀಡಲು ಅವಕಾಶವಾಗಿದೆ. ಈ ಸಂಸ್ಥೆಗೆ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿಯಿಂದ ಸಂಸ್ಥೆಗೆ ಅನುದಾನ ನೀಡಲಾಗುತ್ತಿದೆ.

II ಮಲೇರಿಯ ರೋಗ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:

1. ಜಿಲ್ಲೆಯ 5 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪ್ರದೇಶಗಳನ್ನು "ಸಮಸ್ಯಾತ್ಮಕ" ಎಂದು ಗುರುತಿಸಲಾಗಿದೆ.

2. ಜ್ವರ ನಿಗಾವಣೆ, ರೋಗ ಪತ್ತೆ ಹಾಗೂ ತ್ವರಿತ ಚಿಕಿತ್ಸಾ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿದೆ.

3. ಸಮಸ್ಯೆಯಿಲ್ಲದ ಪ್ರದೇಶಗಳಿಂದ ಕಾರ್ಯಕರ್ತರನ್ನು ಸಮಸ್ಯಾತ್ಮಕ ಪ್ರದೇಶಗಳಿಗೆ ನಿಯೋಜಿಸಿ ಜ್ವರ ತೀವ್ರ ಚಿಕಿತ್ಸೆ ಮತ್ತು ತೀವ್ರ ಜ್ವರ ಸಮೀಕ್ಷಾ ಕಾರ್ಯವನ್ನು ಚುರುಕುಗೊಳಿಸಲಾಗಿದೆ.

4. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರಯೋಗಾಲಯ ವ್ಯವಸ್ಥೆ ಮಾಡಲಾಗಿದ್ದು ಇದಕ್ಕಾಗಿ ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.

5. ಎಲ್ಲಾ ಖಚಿತ ಮಲೇರಿಯ ಪ್ರಕರಣಗಳಿಗೆ ತೀವ್ರ ಚಿಕಿತ್ಸೆ ನೀಡಲಾಗುತ್ತಿದೆ ಹಾಗೂ ಸಮಸ್ಯಾತ್ಮಕ ಪ್ರದೇಶಗಳಲ್ಲಿ ಆದ್ಯತೆಯ ಮೇರೆಗೆ ಪರಿಷ್ಕೃತ ವಿಧಾನದಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ.

6. ರೋಗ ವಾಹಕ ಸೊಳ್ಳೆಗಳ ನಿಯಂತ್ರಣಕ್ಕಾಗಿ ಆಯ್ದ ಪ್ರದೇಶಗಳಲ್ಲಿ ನಿಯಮಿತವಾಗಿ ಕೀಟನಾಶಕ ಸಿಂಪಡಣಾ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತಿದೆ.

7. ಸಂಪರ್ಕ ಜಟಿಲ ಗ್ರಾಮಾಂತರ ಪ್ರದೇಶಗಳಲ್ಲಿ ಜ್ವರ ಪೀಡಿತರಿಗೆ ತುರ್ತಾಗಿ ಚಿಕಿತ್ಸೆಗೆ ಅನುಕೂಲವಾಗುವಂತೆ, 241 ಔಷಧಿ ವಿತರಣಾ ಕೇಂದ್ರಗಳು ಮತ್ತು 36 ಜ್ವರ ಚಿಕಿತ್ಸಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

8. ಸೂಕ್ತ ಪ್ರದೇಶಗಳಲ್ಲಿ ರೋಗವಾಹಕ ಸೊಳ್ಳೆಗಳ ಉತ್ಪತ್ತಿಯನ್ನು ತಡೆಗಟ್ಟಲು ಜೈವಿಕ ಪರಿಸರ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

9. ಮಲೇರಿಯ ನಿಯಂತ್ರಣದ ಬಗೆ ಜನಜಾಗೃತಿ ಮೂಡಿಸಲು ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತಿದ್ದು, ಜೂನ್ ತಿಂಗಳಲ್ಲಿ ಮಲೇರಿಯ ಮಾಸಾಚರಣೆಯನ್ನು ಆಚರಿಸಲಾಗಿದೆ.

ಜಾಬ್ ಓರಿಯಂಟೆಡ್ ಕೋರ್ಸ್ ಮಾಡಿದವರನ್ನು ಶಿಕ್ಷಕರ ಹುದ್ದೆಗೆ ಪರಿಗಣಿಸುವುದು

4118 (4744) : ಶ್ರೀ ಸದಾನಂದ ಗೌಡ ಡಿ.ವಿ (ಪುತ್ತೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕ ಸಮಯದಲ್ಲಿ ಜೆಒಸಿ (ಜಾಬ್ ಓರಿಯೆಂಟೆಡ್ ಕೋರ್ಸ್) ಅಭ್ಯರ್ಥಿಗಳಿಗೆ ಸಮಾನ ಅವಕಾಶ ನೀಡುವಂತೆ ಹೈಕೋರ್ಟ್ ಸರ್ಕಾರಕ್ಕೆ ಆದೇಶಿಸಿದೆಯೇ;

ಆ) ಹಾಗಿದ್ದರೆ, ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಕ್ಕೆ ಆಯ್ಕೆ ಪ್ರಕ್ರಿಯೆ ನಡೆದಿದೆಯೇ;

ಇ) ಈ ಅವಧಿಯಲ್ಲಿ ಎಷ್ಟು ಜೆಒಸಿ ಅಭ್ಯರ್ಥಿಗಳನ್ನು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗೆ ಆಯ್ಕೆ ಮಾಡಲಾಗಿದೆ; ಆಯ್ಕೆ ಮಾಡದೇ ಇದ್ದಲ್ಲಿ ಕಾರಣವೇನು; ವಿವರ ಒದಗಿಸುವುದು;

ಈ) ರಾಜ್ಯ ಹೈಕೋರ್ಟ್ ತೀರ್ಪನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳ ಪೂರ್ತಿ ವಿವರಗಳನ್ನು ಒದಗಿಸುವುದು?

ಪ್ರೊ। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ಹೌದು

ಆ) ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯದಿಂದ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ವಿಚಾರದಲ್ಲಿ ಜೆ.ಒ.ಸಿ, ಪಿ.ಯು.ಸಿ. ವಿದ್ಯಾರ್ಹತೆಗೆ ಸಮಾನವೆಂದು ಆದೇಶವಾಗಿದೆ. ಅದರಂತೆ ಶಿಕ್ಷಣ ಇಲಾಖೆಯಲ್ಲಿ 2002–03ನೇ ಸಾಲಿನಲ್ಲಿ ಬ್ಯಾಕಲಾಗ್ ನೇಮಕಾತಿಯಲ್ಲಿ ಜೆ.ಒ.ಸಿ ಅಭ್ಯರ್ಥಿಗಳನ್ನು ಪರಿಗಣಿಸಿ ನೇಮಕಾತಿ ಮಾಡಿಕೊಳ್ಳಲಾಗಿದೆ.

ಇ) 2002–03ನೇ ಸಾಲಿನ ನೇಮಕಾತಿಯಲ್ಲಿ ಬ್ಯಾಕಲಾಗ್ ಮೂಲಕ ಒಟ್ಟು 1979 ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಮಾಡಲಾಗಿದೆ. ಈ ಪೈಕಿ 31 ಜೆ.ಒ.ಸಿ ಅಭ್ಯರ್ಥಿಗಳು ನೇಮಕಾತಿ ಹೊಂದಿರುತ್ತಾರೆ.

ಈ) ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯದ ಆದೇಶದಂತೆ ಜೆ.ಒ.ಸಿ. ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಈಗಾಗಲೇ 2002–03ನೇ ಸಾಲಿನ ಬ್ಯಾಕಲಾಗ್ ನೇಮಕಾತಿಯಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ. 2001–02ರ ನೇಮಕಾತಿಯಲ್ಲಿನ ಜೆ.ಒ.ಸಿ. ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯವೈಖರಿ

4119 (4745) : ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕನ್ನಡ ಭಾಷೆ ಬಗ್ಗೆ ತಾತ್ಸಾರದಿಂದ ವರ್ತಿಸಿರುವ ಮೂವರು ಐಎಎಸ್ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳುವಂತೆ ಮುಖ್ಯ ಮಂತ್ರಿಗಳಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಬರೆದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ, ಈ ಅಧಿಕಾರಿಗಳು ಯಾರು? ಮತ್ತು ಪ್ರಸ್ತುತ ಅವರು ಯಾವ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ? ಅವರ ಮೇಲೆ ಏನು ಶಿಸ್ತು ಕ್ರಮ ತೆಗೆದುಕೊಳ್ಳಲಾಗಿದೆ;